# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

## ವಿಶೇಷ ರಾಜ್ಯ ಪತ್ರಿಕೆ

| ಭಾಗ – ೪ಎ<br>Part – IVA | ಬೆಂಗಳೂರು, ಶುಕ್ರವಾರ, ೧೨ ಸೆಪ್ಟೆಂಬರ್, ೨೦೨೫ (ಭಾದ್ರಪದ ೨೧, ಶಕವರ್ಷ ೧೯೪೭)<br>BENGALURU, FRIDAY, 12 SEPTEMBER, 2025 (BHADRAPADA 21, SHAKAVARSHA 1947) | ಸಂ. ೫೮೭<br>No. 587 |
|---|---|---|


### ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವಾಲಯ
### ಅಧಿಸೂಚನೆ
### ಸಂಖ್ಯೆ: ಸಂವ್ಯಶಾಇ 53 ಶಾಸನ 2025, ಬೆಂಗಳೂರು, ದಿನಾಂಕ: 12.09.2025

ಗ್ರೇಟರ್ ಬೆಂಗಳೂರು ಆಡಳಿತ (ತಿದ್ದುಪಡಿ) ಅಧಿನಿಯಮ, 2025 ಇದಕ್ಕೆ 2025ರ ಸೆಪ್ಟೆಂಬರ್ ತಿಂಗಳ **11**ನೇ ದಿನಾಂಕದಂದು ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು**,** ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2025ರ ಕರ್ನಾಟಕ ಅಧಿನಿಯಮ ಸಂಖ್ಯೆ: 60 ಎಂಬುದಾಗಿ ಕರ್ನಾಟಕ ರಾಜ್ಯಪತ್ರದಲ್ಲಿ (ಭಾಗ IV-A) ಪ್ರಕಟಿಸಬೇಕೆಂದು ಆದೇಶಿಸಲಾಗಿದೆ,-

### 2025 ರ ಕರ್ನಾಟಕ ಅಧಿನಿಯಮ ಸಂಖ್ಯೆ: 60

**(2025ರ ಸೆಪ್ಟೆಂಬರ್ ತಿಂಗಳ 12ನೇ ದಿನಾಂಕದಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)**

### ಗ್ರೇಟರ್ ಬೆಂಗಳೂರು ಆಡಳಿತ (ತಿದ್ದುಪಡಿ) ಅಧಿನಿಯಮ, 2025

**(2025ರ ಸೆಪ್ಟೆಂಬರ್ ತಿಂಗಳ 11ನೇ ದಿನಾಂಕದಂದು ರಾಜ್ಯಪಾಲರಿಂದ ಅನುಮತಿಯನ್ನು ಪಡೆಯಲಾಗಿದೆ)**

ಗ್ರೇಟರ್ ಬೆಂಗಳೂರು ಆಡಳಿತ ಅಧಿನಿಯಮ, 2024ನ್ನು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಗ್ರೇಟರ್ ಬೆಂಗಳೂರು ಆಡಳಿತ ಅಧಿನಿಯಮ, 2024 (2025ರ ಕರ್ನಾಟಕ ಅಧಿನಿಯಮ ಸಂ. 36) ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ ;

ಇದು, ಭಾರತ ಗಣರಾಜ್ಯದ ಎಪ್ಪತ್ತಾರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಗ್ರೇಟರ್ ಬೆಂಗಳೂರು ಆಡಳಿತ (ತಿದ್ದುಪಡಿ) ಅಧಿನಿಯಮ, 2025 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೆ ಜಾರಿಗೆ ಬರತಕ್ಕದ್ದು.

**2. ಪ್ರಕರಣ 8ರ ತಿದ್ದುಪಡಿ.-** ಗ್ರೇಟರ್ ಬೆಂಗಳೂರು ಆಡಳಿತ ಅಧಿನಿಯಮ, 2024 (2025ರ ಕರ್ನಾಟಕ ಅಧಿನಿಯಮ 36) (ಇಲ್ಲಿ ಇನ್ನುಮುಂದೆ ಮೂಲ ಅಧಿನಿಯಮವೆಂದು

ಉಲ್ಲೇಖಿಸಲಾಗಿದೆ)ರಲ್ಲಿನ 8ನೇ ಪ್ರಕರಣದ (2)ನೇ ಉಪ-ಪ್ರಕರಣಕ್ಕೆ ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ:-

"(2) ಗ್ರೇಟರ್ ಬೆಂಗಳೂರು ಪ್ರಾಧಿಕಾರವು ಈ ಅಧಿನಿಯಮದ ಉಪಬಂಧಗಳನುಸಾರ ಅಂಥ ಪ್ರಕಾರ್ಯಗಳನ್ನು ನೆರವೇರಿಸತಕ್ಕದ್ದು."

**3. ಪ್ರಕರಣ 14ರ ತಿದ್ದುಪಡಿ.-** ಮೂಲ ಅಧಿನಿಯಮದ 14ನೇ ಪ್ರಕರಣದ (1)ನೇ ಉಪ-ಪ್ರಕರಣದಲ್ಲಿನ "ನಗರ ಪಾಲಿಕೆಗಳ ಆಡಳಿತಾತ್ಮಕ ಪ್ರಕಾರ್ಯಗಳನ್ನು ನಿರ್ವಹಿಸತಕ್ಕದ್ದು ಮತ್ತು ಅಧಿಕಾರಗಳನ್ನು ಚಲಾಯಿಸತಕ್ಕದ್ದು" ಎಂಬ ಪದಗಳಿಗೆ ಬದಲಾಗಿ "ಅಂಥ ಪ್ರಕಾರ್ಯಗಳನ್ನು ನೆರವೇರಿಸತಕ್ಕದ್ದು" ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**ಜಿ. ಶ್ರೀಧರ್**
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಇಲಾಖೆ.

**DEPARTMENT OF PARLIAMENTARY AFFAIRS AND LEGISLATION SECRETARIAT**

**NOTIFICATION**

**NO: DPAL 53 SHASANA 2025, BENGALURU, DATED:12.09.2025**

ಭಾರತ ಸಂವಿಧಾನದ ಅನುಚ್ಛೇದ 348ರಡಿಯಲ್ಲಿ ರಾಜ್ಯಪಾಲರಿಂದ ಅಧಿಕೃತಗೊಳಿಸಿದ ಗ್ರೇಟರ್ ಬೆಂಗಳೂರು ಆಡಳಿತ (ತಿದ್ದುಪಡಿ) ಅಧಿನಿಯಮ, 2025 (2025ರ ಕರ್ನಾಟಕ ಅಧಿನಿಯಮ ಸಂಖ್ಯೆ: 60)ರ ಭಾಷಾಂತರವನ್ನು ಅಧಿಕೃತ ಆಂಗ್ಲ ಪಠ್ಯವೆಂದು ಕರ್ನಾಟಕ ರಾಜ್ಯಪತ್ರದಲ್ಲಿ (ಭಾಗ IV-A) ಪ್ರಕಟಿಸಬೇಕೆಂದು ಆದೇಶಿಸಲಾಗಿದೆ,-

**KARNATAKA ACT NO. 60 OF 2025**

(First published in the Karnataka Gazette Extra-ordinary on the 12th day of September, 2025)

**THE GREATER BENGALURU GOVERNANCE (AMENDMENT) ACT, 2025**

(Received the assent of the Governor on the 11th day of September, 2025)

An Act to amend the Greater Bengaluru Governance Act, 2024.

Whereas it is expedient to amend the Greater Bengaluru Governance Act, 2024 (Karnataka Act 36 of 2025) for purposes hereinafter appearing:

Be it enacted by the Karnataka State Legislature in the seventy sixth year of the Republic India as follows:-

**1. Short title commencement.-** (1) This Act may be called the Greater Bengaluru Governance (Amendment) Act, 2025.

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



(2) It shall come into force at once.

**2. Amendment of section 8.**- In the Greater Bengaluru Governance Act, 2024 (Karnataka Act 36 of 2025) (hereinafter referred to as the Principal Act), in section 8, for sub-section (2), the following shall be substituted, namely:-

"(2) The Greater Bengaluru Authority shall discharge such functions as per provisions of this Act."

**3. Amendment of section 14.-** In the Principal Act, in section 14, in sub-section (1), for the words "Administrative functions and powers on the administration of the City Corporations" the words "such functions", shall be substituted.

The above translation of ಗ್ರೇಟರ್ ಬೆಂಗಳೂರು ಆಡಳಿತ (ತಿದ್ದುಪಡಿ) ಅಧಿನಿಯಮ, 2025 (2025ರ ಕರ್ನಾಟಕ ಅಧಿನಿಯಮ ಸಂಖ್ಯೆ: 60) be published in the official Gazette under Article 348 of the Constitution of India.

**THAAWARCHAND GEHLOT**
**GOVERNOR OF KARNATAKA**

By Order and in the name of
the Governor of Karnataka,

**G. Sridhar**
Secretary to Government
Department of Parliamentary Affairs
and Legislation

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

THAMMAIAH